<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರವಾಗಿಃ ಶ್ರೀ ಜೆ.ಡಿ. ವಕೀಲರಿಂದಃ</u>

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಪ್ರ ವ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 1 ಅಂತ, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 2 ಅಂತ, ಸದರಿ ಕೇಸಿನಲ್ಲಿ ನಡೆಸಿದ ಸ್ಥಳ ಪಂಚನಾಮೆ ಮತ್ತು ವಾಹನ ಪರಿಶೀಲನಾ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿಃ 3 ಅಂತ, ಐ.ಎಂ.ವಿ. ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 4 ಅಂತ, ನನ್ನ ಗಾಯದ ಪ್ರಮಾಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿಃ 5 ಅಂತ, ಅಂತಿಮ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 6 ಅಂತ, 17 ಹಣ ಸಂದಾಯ ರಸೀದಿ ಮತ್ತು ಮೆಡಿಕಲ್ ಬಿಲ್ಲುಗಳನ್ನು ಒಟ್ಟಾಗಿ ನಿಪಿಃ 7 ಅಂತ, 10 ಪ್ರಿಸ್ ಕ್ರಿಪ್ಷನ್ ಗಳನ್ನು ಒಟ್ಟಾಗಿ ನಿಪಿಃ 8 ಅಂತ ಗುರುತಿಸಲಾಯಿತು. ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ ಇವರು ನೀಡಿರುವ ಎರಡು ಔಟ್ ಪೇಷಂಟ್ ರೆಕಾರ್ಡನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 9 ಮತ್ತು 10 ಅಂತ ಗುರುತಿಸಲಾಯಿತು. ರಂಗೇಗೌಡ, ಖುಷಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯವರು ನೀಡಿರುವ 3 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 11 ರಿಂದ 13 ಅಂತ ಗುರುತಿಸಲಾಯಿತು. ಬಸವೇಶ್ವರ ಮೆಡಿಕಲ್ ಆಸ್ಪತ್ರೆಯವರು ನೀಡಿರುವ ಪ್ರಿಸ್ ಕ್ರಿಪ್ಷನ್ ಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 14 ಅಂತ ಗುರುತಿಸಲಾಯಿತು. 4 ಲ್ಯಾಬ್

ರಿಪೋರ್ಟ್ ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 15 ರಿಂದ 18 ಅಂತ ಗುರುತಿಸಲಾಯಿತು, ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ ಇವರು ನೀಡಿರುವ ಡಿಸ್ ಚಾರ್ಜ್ ಕಾರ್ಡನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 19 ಅಂತ, ಡಾ. ವೆಂಕಟಶಿವರೆಡ್ಡಿ ರವರು ನೀಡಿದ ಅಂಗನ್ಯೂನ್ಯತೆ ಪ್ರಮಾಣಪತ್ರ ಹಾಜರುಪಡಿಸಿದ್ದು ಅದನ್ನು ನಿಪಿಃ 20 ಅಂತ ಗುರುತಿಸಲಾಯಿತು. ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ ಎರಡು ಕ್ಷ-ಕಿರಣ ಹಾಗೂ ಬಸವೇಶ್ವರ ಆಸ್ಪತ್ರೆಯ ಎರಡು ಕ್ಷ ಕಿರಣ ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 21 ರಿಂದ 23 ಅಂತ ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕಾಣಿಸಿರುವಂತೆ ಆದೇಶವಾಗಲು ಪಾರ್ಥನೆ.

(1 ನೇ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೇ.ಸ. ಇದೆ.

ಹಿರಿಯ ಸಿವಿಲ್‌ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಚಳ್ಳಕೆರೆ.